**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಹೊನ್ನಾವರ. ಸಿ.ಸಿ ನಂ.992/2023.**

ಪಿರ್ಯಾದುದಾರರುಃ- ಪ್ರಾಥಮಿಕ ಸಹಕಾರಿ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ
ಬ್ಯಾಂಕ್ ನಿಯಮಿತ, ಹೊನ್ನಾವರ ,
ಪ್ರತಿನಿಧಿಸುವವರು,
ಶ್ರೀ ಹನುಮಂತ ವಿಷ್ಣು ನಾಯ್ಕ,
ನಿಷ್ಪತ್ ಪ್ರಭಾರಿ ಪ್ರಧಾನ ವ್ಯವಸ್ಥಾಪಕರು,
ತಾಲೂಕುಃ- ಹೊನ್ನಾವರ (ಉ.ಕ.).

**-ವಿರುದ್ಧ-**

ಆರೋಪಿಯ ಹೆಸರುಃ- ವಿನೋದ ಜಟ್ಟಿ ನಾಯ್ಕ,
ಸಾಕೀನಃ- ಮಹಿಮೆ ಪೈಕಿ ಬೈಲಗದ್ದೆ ,
ತಾಲೂಕುಃ- ಹೊನ್ನಾವರ (ಉ.ಕ.).

**ಆಪಾದನೆ**

ಶ್ರೀ ಈರಣ್ಣ ಹುಣಶಿಕಟ್ಟಿ, ಬಿ.ಕಾಂ., ಎಲ್.ಎಲ್.ಬಿ., ಹೆಚ್ಚುವರಿ ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯಾದ ನಾನು ಆರೋಪಿಯಾದ ನಿಮ್ಮ ಮೇಲೆ ಈ ಕೆಳಕಂಡ ಆಪಾದನೆ ಹೊರಿಸುತ್ತಿದ್ದೇನೆ.

ದಿನಾಂಕ 04-08-2016 ರಂದು ಆರೋಪಿಯಾದ ನೀವು ಪಿರ್ಯಾದಿ ಸಂಸ್ಥೆಯಲ್ಲಿ ಸಾಲದ ಖಾತೆ ಸಂಖ್ಯೆ PL 837 ರಡಿಯಲ್ಲಿ ರೂ.50,000/- ಗಳನ್ನು ಸಾಲವಾಗಿ ಪಡೆದುಕೊಂಡಿದ್ದು, ಸದರಿ ಸಾಲದ ಮರುಪಾವತಿಗಾಗಿ ನೀವು ಪಿರ್ಯಾದಿ ಸಂಸ್ಥೆಯ ಹೆಸರಿಗೆ ನಿಮ್ಮ ಬ್ಯಾಂಕ್ ಖಾತೆಯುಳ್ಳ **ಐಸಿಐಸಿಐ ಬ್ಯಾಂಕ್., ಮಿರ್ಜಾನ್** ಶಾಖೆಯ ಚೆಕ್ ನಂ.001167 ನ್ನು ದಿನಾಂಕ 14-06-2023 ರಂದು ಬಡ್ಡಿಯನ್ನು ಒಳಗೊಂಡಂತೆ ರೂ.82,069/- ಎಂದು ನಮೂದಿಸಿ ಚೆಕ್ ಗೆ ಸಹಿ ಮಾಡಿಕೊಟ್ಟು, ಸದರಿ ಚೆಕ್ ನ್ನು ಬ್ಯಾಂಕ್ ಗೆ ಹಾಜರುಪಡಿಸಿದ ಕೂಡಲೇ ಹಣ ಸಿಗುತ್ತದೆ ಎಂದು ಭರವಸೆ ನೀಡಿದ್ದು, ಅದರಂತೆ ಪಿರ್ಯಾದಿಯವರು ಹಣ ಪಡೆಯುವ ಸಲುವಾಗಿ ಸದರಿ ಚೆಕನ್ನು ಅವರ ಸಂಸ್ಥೆಯ ಖಾತೆಯಿರುವ **ಕೆ.ಡಿ.ಸಿ.ಸಿ., ಬ್ಯಾಂಕ್., ಹೊನ್ನಾವರ** ಶಾಖೆಯಲ್ಲಿ ಹಾಜರುಪಡಿಸಿದಾಗ, ಸದರಿ ಬ್ಯಾಂಕ್ ನವರು, “Account Closed” ಎಂದು ತಿಳಿಸಿ ಸದರಿ ಚೆಕನ್ನು ದಿನಾಂಕ 19-06-2023 ರಂದು ಮೆಮೋದೊಂದಿಗೆ ವಾಪಾಸ್ ನೀಡಿರುತ್ತಾರೆ. ಈ ಕುರಿತು

ಪಿರ್ಯಾದಿಯವರು ನಿಮಗೆ ವಕೀಲರ ಮೂಲಕ ದಿನಾಂಕ 12-07-2023 ರಂದು ರಿಜಿಸ್ಟರ್ ನೋಟಿಸ್ ಕಳುಹಿಸಿದ್ದು, ಸದರಿ ನೋಟಿಸ್ ದಿನಾಂಕ 24-07-2023 ರಂದು ಜಾರಿಯಾಗಿದ್ದರೂ ಸಹ ನೀವು ಸದರಿ ಚೆಕ್ ನಲ್ಲಿ ನಮೂದಿಸಿದ ಹಣವನ್ನು ಸಹ ನೀಡದೇ ನೆಗೋಶಿಯೇಬಲ್ ಇನ್ ಸ್ಟ್ರುಮೆಂಟ್ ಕಾಯಿದೆ ಕಲಂ. 138 ರಡಿಯಲ್ಲಿ ಶಿಕ್ಷಾರ್ಹ ಅಪರಾಧ ಮಾಡಿರುತ್ತೀರೆಂದು ಆರೋಪಿಸಲಾಗಿದೆ.

ಪ್ರಶ್ನೆ1: ಈಗ ನಿಮಗೆ ಓದಿ ಹೇಳಿದ ಆಪಾದನೆ ತಿಳಿಯಿತೇ?

ಆರೋಪಿಯ ಉತ್ತರ : ತಿಳಿಯಿತು.

ಪ್ರಶ್ನೆ 2: ಸದ್ರಿ ಆಪಾದನೆಯನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆಯಾಗಬೇಕೇ?

ಆರೋಪಿಯ ಉತ್ತರ : ವಿಚಾರಣೆಯಾಗಬೇಕು.

(ಈ ಮೂಲಕ ಪ್ರಮಾಣಿಸುವುದೇನೆಂದರೆ ಆರೋಪಿಯು ಕೊಟ್ಟಂತ ಹೇಳಿಕೆಯ ಉತ್ತರವನ್ನು ಪಡೆಯಲಾಗಿದೆ )

**ಸಹಿ ಇದೆ.**

**ದಿನಾಂಕಃ- 30-01-2025.**

**(ಈರಣ್ಣ ಹುಣಶಿಕಟ್ಟಿ).,**
**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಮ್.ಎಫ್.ಸಿ.ರವರ ನ್ಯಾಯಾಲಯ.,ಹೊನ್ನಾವರ.**

ಆರೋಪಿಯ ಸಹಿಃ-

**ಸಹಿ ಇದೆ.**

****